# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 26-03-2021 ಪ್ರಶ್ನೆ ಸಂಖ್ಯೆ : 303(2251)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪ್ರದೀಪ್ ಶೆಟ್ಟರ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 26-03-2021

ಉತ್ತರಿಸುವ ಸಚಿವರು: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು

ವಿಷಯ : ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಬಗ್ಗೆ

(ಅ) ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬಿಲ್ ಕಲೆಕ್ಟರ್, ಡೇಟಾ ಎಂಟ್ರೀ ಆಪೇರೇಟರ್‌ಗಳ ಸಂಬಳ ಮತ್ತು ಭತ್ಯೆಯನ್ನು ಯಾವ ಮಾನದಂಡದಲ್ಲಿ ನಿಗಧಿಪಡಿಸಲಾಗುತ್ತದೆ;

(ಆ) ಸದರಿ ಸಿಬ್ಬಂದಿಗಳನ್ನು ದುರ್ನಡತೆಯ ಆಧಾರದಲ್ಲಿ ಸೇವೆಯಿಂದ ಬಿಡುಗಡೆಗೊಳಿಸಿದ ನಂತರದಲ್ಲಿ ಖಾಲಿಯಾದ ಸ್ಥಾನವನ್ನು ಯಾವ ಆಧಾರದ ಮೇಲೆ ಭರ್ತಿ ಮಾಡಲಾಗುತ್ತಿದೆ;

(ಇ) ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಬರುವಂತಹ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ವೇತನ ಯಾವುದೇ ಬಾಕಿ ಇಲ್ಲದೆ ಬಿಡುಗಡೆಯಾಗಿದೆಯೇ; ಬಾಕಿ ಇದ್ದಲ್ಲಿ ಬಿಡುಗಡೆಗೆ ಸಂಬಂಧಿಸಿದಂತೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ?